**ಪತ್ರಿಕಾ ಪ್ರಕಟಣೆ**

## ಕರ್ನಾಟಕ ವಾಣಿಜ್ಯ ತೆರಿಗೆಗಳ ಇಲಾಖೆಯಿಂದ ಪಾನ್ ಮಸಾಲ ಮತ್ತು ತಂಬಾಕಿನ ಅನಧಿಕೃತ ಗೋದಾಮುಗಳ ಮೇಲೆ ದಾಳಿ

ಕರ್ನಾಟಕ ಸರ್ಕಾರದ ವಾಣಿಜ್ಯ ತೆರಿಗೆಗಳ ಇಲಾಖೆಯ ಜಾರಿ ಹಾಗೂ ಜಾಗೃತಿ ವಿಭಾಗದ ಅಧಿಕಾರಿಗಳು ನಡೆಸಿದ ಜಂಟಿ ಕಾರ್ಯಾಚರಣೆಯಲ್ಲಿ ಟ್ರಾನ್ಸ್‌ಪೋರ್ಟ್ ಗೋದಾಮು ಹಾಗೂ ಅನಧಿಕೃತ ಗೋದಾಮುಗಳ ಮೇಲೆ ದಾಳಿ ನಡೆಸಿ ಸುಮಾರು ಒಂದು ಕೋಟಿ ರೂ. ಮೌಲ್ಯದ ಪಾನ್ ಮಸಾಲ ಹಾಗೂ ತಂಬಾಕು ಉತ್ಪನ್ನಗಳನ್ನು ಯಾವುದೇ ದಾಖಲೆಗಳಿಲ್ಲದೆ ಶೇಖರಿಸಿರುವುದನ್ನು ಪತ್ತೆ ಹಚ್ಚಿ ಭಾಗಶ: ದಂಡವನ್ನು ಈಗಾಗಲೇ ಸಂಗ್ರಹಿಸಿರುತ್ತಾರೆ. ಮುಂದಿನ ತನಿಖೆ ಪ್ರಗತಿಯಲ್ಲಿದೆ.










ನಿರ್ಧಿಷ್ಟ ಮಾಹಿತಿಯನ್ವಯ ವಾಣಿಜ್ಯ ತೆರಿಗೆ ಅಪರ ಆಯುಕ್ತರು (ಜಾರಿ), ದಕ್ಷಿಣ ವಲಯ ಹಾಗೂ ವಾಣಿಜ್ಯ ತೆರಿಗೆ ಜಂಟಿ ಆಯುಕ್ತರು (ಜಾಗೃತಿ) ಇವರ ನೇತೃತ್ವದಲ್ಲಿ ಅಧಿಕಾರಿಗಳ ತಂಡವು ಬೆಂಗಳೂರಿನಲ್ಲಿರುವ ಟ್ರಾನ್ಸ್‌ಪೋರ್ಟ್ ಗೋದಾಮು ಹಾಗೂ ಬೆಂಗಳೂರಿನ ಹೊರ ವಲಯದ ವಸತಿ ಪ್ರದೇಶಗಳಲ್ಲಿರುವ ಅನಧಿಕೃತ ಗೋದಾಮುಗಳ ಮೇಲೆ ದಾಳಿ ನಡೆಸಿ ಅಪಾರ ಪ್ರಮಾಣದ ಪಾನ್ ಮಸಾಲ ಮತ್ತು ತಂಬಾಕು ಉತ್ಪನ್ನಗಳನ್ನು ದಾಸ್ತಾನು ಮಾಡಿರುವುದನ್ನು ಪತ್ತೆ ಹಚ್ಚಿರುತ್ತಾರೆ. ದಾಸ್ತಾನುದಾರರು ಜಿ.ಎಸ್.ಟಿ. ಕಾಯ್ದೆಯಡಿ ನೋಂದಣಿ ಪಡೆಯದೇ, ಗೋದಾಮುಗಳ ಮುಂದೆ ನಾಮಫಲಕವನ್ನು ಪ್ರದರ್ಶಿಸದೇ, ವಸ್ತುಗಳನ್ನು ಶೇಖರಿಸಿರುತ್ತಾರೆ. ತಮಿಳುನಾಡು ರಾಜ್ಯದಲ್ಲಿ ಪಾನ್‌ಮಸಾಲ ಹಾಗೂ

ತಂಬಾಕು ಉತ್ಪನ್ನಗಳ ಮಾರಾಟವನ್ನು ನಿಷೇಧಿಸಿರುವುದರಿಂದ, ವ್ಯವಹಾರಸ್ಥರು ಅನಧಿಕೃತವಾಗಿ ಕರ್ನಾಟಕದ ಗಡಿ ಭಾಗದ ಹೊಸೂರು ರಸ್ತೆ ಮತ್ತು ಸುತ್ತಮುತ್ತಲಿನ ಪ್ರದೇಶದಲ್ಲಿ ತಮಿಳು ನಾಡಿಗೆ ಅನಧಿಕೃತವಾಗಿ ಸಾಗಿಸುವ ಉದ್ದೇಶದಿಂದ ತಂಬಾಕು ಉತ್ಪನ್ನಗಳನ್ನು ಶೇಖರಣೆ ಮಾಡಿರಬಹುದೆಂದು ಸಂಶಯಪಡಲಾಗಿದೆ.

ವಾಣಿಜ್ಯ ತೆರಿಗೆಗಳ ಇಲಾಖೆಯು ಪಾನ್‌ಮಸಾಲ ಹಾಗೂ ತಂಬಾಕು ಉತ್ಪನ್ನಗಳ ಮಾರಾಟ ಹಾಗೂ ಸಾಗಣಿಕೆಯನ್ನು ಸೂಕ್ಷ್ಮವಾಗಿ ಗಮನಸುತ್ತಿದ್ದು, ಯಾವುದಾದರೂ ವ್ಯಕ್ತಿಯು ಇಂತಹ ಅನಧಿಕೃತ ಗೋದಾಮುಗಳ ಬಗ್ಗೆ ಮಾಹಿತಿಯನ್ನು ಹೊಂದಿದ್ದಲ್ಲಿ ಇಲಾಖೆಯ ನಿಯಂತ್ರಣ ಕೊಠಡಿ ದೂರವಾಣಿ ಸಂಖ್ಯೆ : 080–25704970 ಗೆ ಮಾಹಿತಿಯನ್ನು ಒದಗಿಸಲು ಕೋರಲಾಗಿದೆ. ಮುಂದುವರೆದು, ತೆರಿಗೆ ವಂಚಿಸುವ ವ್ಯಕ್ತಿಗಳ ವಿರುದ್ಧ ಇಲಾಖೆಯು ಕಠಿಣ ಕ್ರಮವನ್ನು ಜರುಗಿಸುವುದೆಂದು ಈ ಮೂಲಕ ತಿಳಿಸಲಾಗಿದೆ.

(ಎಂ.ಎಸ್.ಶ್ರೀಕರ್)
ವಾಣಿಜ್ಯ ತೆರಿಗೆಗಳ ಆಯುಕ್ತರು
ಕರ್ನಾಟಕ, ಬೆಂಗಳೂರು